ಸಿ.ಸಿ. ಸಂಃ 1111/2022 ಪಿ.ಡಬ್ಲ್ಯು: 01

ದಿನಾಂಕಃ 21-11-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಪಾಟೀ ಸವಾಲು ಶ್ರೀ. ಸರ್ಕಾರಿ ಅಭಿಯೋಜಕರಿಂದಃ

ನನಗೆ ಹಣ ನೀಡಿದವರನ್ನು ನ್ಯಾಯಾಲಯದ ಮುಂದೆ ಸಾಕ್ಷಿ ನುಡಿಯಲು ಹಾಜರಿಡಲು ನನಗೆ ಯಾವುದೇ ತೊಂದರೆ ಇರುವುದಿಲ್ಲ. ನಿಪಿ-1 ರಲ್ಲಿ ಫೈಲ್ ಮಾಡಿರುವ ಸಾಕ್ಷಿಗಳ ತಂದೆಯ ಹೆಸರು ಹಾಗೂ ಅವರ ವಿಳಾಸಗಳು ನಮೂದು ಇರುವುದಿಲ್ಲ ಎಂದರೆ ಸರಿ. ಸಾಮಾನ್ಯವಾಗಿ ಪ್ರಾಮಿಸರಿ ನೋಟ್ ಅನ್ನು ಬರೆದು ಕೊಟ್ಟವರ ಬಳಿ ಅಸಲಿ ಪ್ರತಿ ಇರುತ್ತದೆ ಎಂದರೆ ಸಾಕ್ಷಿ ನಿಪಿ-1 ನ್ನು ನಾನು ಬರೆದುಕೊಟ್ಟವರಿಂದ ಕೇಳಿ ಪಡೆದುಕೊಂಡಿರುತ್ತೇನೆ ಎಂದು ನುಡಿಯುತ್ತಾರೆ. ಈ ಪ್ರಕರಣದಲ್ಲಿ ವಶಪಡಿಸಿಕೊಂಡಿರುವ ಹಣವನ್ನು ಪಡೆದುಕೊಂಡು ಲಾಭ ಮಾಡಿಕೊಳ್ಳಬೇಕೆಂಬ ಉದ್ದೇಶದಿಂದ ನಿಪಿ-1 ರ ಸುಳ್ಳು ದಾಖಲೆಯನ್ನು ಸೃಷ್ಠಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ನಿಪಿ-1 ನ್ನು ಬರೆದ ಬಿಕ್ಲಂದಾರರ ವಿವರಗಳು ಸಹ ನಿಪಿ-1 ರಲ್ಲಿ ಬರೆದಿರುವುದಿಲ್ಲ ಎಂದರೆ ಸರಿ.

**(**ಮರುವಿಚಾರಣೆ ಇರುವುದಿಲ್ಲ**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-
ಪ್ರ.ಸಿ.ನ್ಯಾ.ಮತ್ತು ಜೆಎಂಎಫ್‌ಸಿ,
ಗೌರಿಬಿದನೂರು